**National**
**Kannada**
**14.04.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಹರಿಯಾಣದಲ್ಲಿಂದು ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಭಾರತೀಯ ಕರಾವಳಿ ಕಾವಲು ಪಡೆಯಿಂದ 1 ಸಾವಿರದ 800 ಕೋಟಿ ರೂಪಾಯಿ ಮೌಲ್ಯದ ಮಾದಕವಸ್ತು ವಶ
3. ಬ್ಲೂ ಒರಿಜಿನ್‌ನಿಂದ ಗಾಯಕಿ ಕೇಟಿ ಪೆರ್ರಿ ಸೇರಿ ಆರು ಮಹಿಳೆಯರು ಇಂದು ಬಾಹ್ಯಾಕಾಶಕ್ಕೆ
4. ಐಪಿಎಲ್ ಟಿ-20 ಕ್ರಿಕೆಟ್: ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ಫೀಲ್ಡಿಂಗ್ ಆಯ್ಕೆ

*****************

ನಿರಂತರ ಹಾಗೂ ಕ್ಷಿಪ್ರಗತಿಯ ಅಭಿವೃದ್ಧಿ ಕೇಂದ್ರ ಸರ್ಕಾರದ ಮಂತ್ರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಅವರು ಇಂದು ಹರಿಯಾಣದ ಹಿಸ್ಸಾರ್‌ನಲ್ಲಿ ಹಿಸ್ಸಾರ್-ಅಯೋಧ್ಯೆ ನಡುವಿನ ವಾಣಿಜ್ಯ ವಿಮಾನ ಯಾನಕ್ಕೆ ಹಸಿರು ನಿಶಾನೆ ತೋರಿದರು.

ಇದೇ ವೇಳೆ ಅವರು, 410 ಕೋಟಿ ರೂಪಾಯಿ ಮೌಲ್ಯದ ಹಿಸ್ಸಾರ್ ವಿಮಾನ ನಿಲ್ದಾಣದ ಹೊಸ ಟರ್ಮಿನಲ್-2 ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿದರು.

ಬಳಿಕ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜೀವನ ಸಂಘರ್ಷ, ಸಂದೇಶ ಕೇಂದ್ರ ಸರ್ಕಾರದ 11 ವರ್ಷಗಳ ಯಾತ್ರೆಯ ಪ್ರೇರಣಾ ಸ್ತಂಭವಾಗಿದೆ. ಸರ್ಕಾರ ತೆಗೆದುಕೊಂಡಿರುವ ಪ್ರತಿಯೊಂದು ನಿರ್ಧಾರಗಳು, ಜಾರಿಗೊಳಿಸಿರುವ ಪ್ರತಿಯೊಂದು ನೀತಿಗಳು, ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಸಮರ್ಪಿತವಾಗಿದೆ ಎಂದು ಹೇಳಿದರು.

ವಂಚಿತ, ಶೋಷಿತ, ಬಡ ವರ್ಗ, ಆದಿವಾಸಿ ಸಮುದಾಯ ಹಾಗೂ ಮಹಿಳೆಯರ ಜೀವನದಲ್ಲಿ ಬದಲಾವಣೆಗಳನ್ನು ತರಲು ಅವರ ಕನಸುಗಳನ್ನು ನನಸಾಗಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದರು.

ನಿರಂತರ ಪ್ರಗತಿಯ ಮಂತ್ರದೊಂದಿಗೆ ಕೇಂದ್ರ ಸರ್ಕಾರ ಇಂದು ಹರಿಯಾಣದಿಂದ ಅಯೋಧ್ಯೆಗೆ ವಿಮಾನ ಸಂಚಾರಕ್ಕೆ ಚಾಲನೆ ನೀಡಲಾಗಿದೆ. 2014 ಕ್ಕಿಂತ ಮೊದಲು ಭಾರತದಲ್ಲಿ ಕೇವಲ 74 ವಿಮಾನ ನಿಲ್ದಾಣಗಳಿದ್ದವು. ಈಗ ಭಾರತದ ವಿಮಾನ ನಿಲ್ದಾಣಗಳ ಸಂಖ್ಯೆ 150ಕ್ಕೂ ಮೀರಿದೆ. ಕೇಂದ್ರ ಸರ್ಕಾರದ ಉಡಾನ್ ಯೋಜನೆಯ ಯಶಸ್ವಿ ಅನುಷ್ಠಾನವು ಸಾವಿರಾರು ಭಾರತೀಯರನ್ನು ಮೊದಲ ಬಾರಿಗೆ ವಿಮಾನಯಾನ ಕೈಗೊಳ್ಳಲು ಅನುವು ಮಾಡಿಕೊಟ್ಟಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಧ್ವನಿ: ಪ್ರಧಾನಿ ಮೋದಿ 21

ನಂತರ ಯಮುನಾ ಸಾಗರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅವರು ಶಂಕುಸ್ಥಾಪನೆ ಹಾಗೂ ಲೋಕಾರ್ಪಣೆ ನೆರವೇರಿಸಿದರು.

ದೀನ ಬಂಧು ಚೋಟು ರಾಮ್ ಶಾಖೋತ್ಪನ್ನ ವಿದ್ಯುತ್ ಸ್ಥಾವರದ 800 ಮೆಗಾವ್ಯಾಟ್ ಸಾಮರ್ಥ್ಯದ ಆಧುನಿಕ ಶಾಖೋತ್ಪನ್ನ ಘಟಕಕ್ಕೆ ಶಿಲಾನ್ಯಾಸ ನೆರವೇರಿಸಿದರು. ಗೋಬರ್‌ಧನ್ ಯೋಜನೆ ಅನ್ವಯ ಮುಕರಾಬ್‌ಪುರದಲ್ಲಿ ಸಂಕುಚಿತ ಜೈವಿಕ ಅನಿಲ ಸ್ಥಾವರಕ್ಕೆ ಅಡಿಗಲ್ಲು ಹಾಕಿದರು.

ಭಾರತ್ ಮಾಲಾ ಪರಿ ಯೋಜನೆಯಡಿ ಒಂದು ಸಾವಿರದ 70 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ 14.4 ಕಿಲೋಮೀಟರ್ ರೇವಾರಿ ಬೈಪಾಸ್ ಯೋಜನೆಯನ್ನು ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆಗೊಳಿಸಿದರು.

*****************

ಗುಜರಾತ್ ಭಯೋತ್ಪಾದಕನಾ ನಿಗ್ರಹ ದಳದ ಸಹಯೋಗದೊಂದಿಗೆ ನಡೆದ ಪ್ರಮುಖ ಮಾದಕ ವಸ್ತು ವಿರೋಧಿ ಕಾರ್ಯಾಚರಣೆಯಲ್ಲಿ, ಭಾರತೀಯ ಕರಾವಳಿ ಕಾವಲು ಪಡೆ ಬರೋಬ್ಬರಿ 1 ಸಾವಿರದ 800 ಕೋಟಿ ರೂಪಾಯಿ ಮೌಲ್ಯದ 300 ಕಿಲೋಗ್ರಾಮ್‌ಗಳಷ್ಟು ಮೆಂಥಾಮ್ ಪೆಟಮೈನ್ ವಶಪಡಿಸಿಕೊಂಡಿದೆ.

ಖಚಿತ ಗುಪ್ತಚರ ಮಾಹಿತಿ ಮೇರೆಗೆ ಕರಾವಳಿ ಕಾವಲು ಪಡೆ ನಿನ್ನೆ ತಡರಾತ್ರಿ ಕಾರ್ಯಾಚರಣೆ ನಡೆಸಿ, ಅಂತಾರಾಷ್ಟ್ರೀಯ ಸಮುದ್ರ ಗಡಿರೇಖೆಯ ಬಳಿ ಶಂಕಿತ ಹಡಗನ್ನು ತಡೆ ಹಿಡಿಯಿತು. ಈ ವೇಳೆ, ಶಂಕಿತರು ಮಾದಕ ವಸ್ತುಗಳನ್ನು ಸಮುದ್ರಕ್ಕೆ ಎಸೆದು ಹಡಗಿನೊಂದಿಗೆ ಪರಾರಿಯಾಗಿದ್ದಾರೆ.

ನಂತರ ಕರಾವಳಿ ಕಾವಲು ಪಡೆಯ ಸಿಬ್ಬಂದಿ ಮಾದಕ ವಸ್ತುಗಳನ್ನು ವಶಪಡಿಸಿಕೊಂಡರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು ನಿರ್ಧಯವಾಗಿ ಮಾದಕ ವಸ್ತು ಜಾಲಗಳನ್ನು ಬೇರುಸಹಿತ ಕಿತ್ತು ಹಾಕುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ದೇಶದ ಭದ್ರತಾ ಸಂಸ್ಥೆಗಳು, ಗುಜರಾತ್‌ನ ಅಂತಾರಾಷ್ಟ್ರೀಯ ಸಮುದ್ರ ಗಡಿಯ ಬಳಿ 1 ಸಾವಿರದ 800 ಕೋಟಿ ರೂಪಾಯಿ ಮೌಲ್ಯದ 300 ಕಿಲೋಗ್ರಾಂಗಳಷ್ಟು ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದೆ. ಇದರಲ್ಲಿ ಗುಜರಾತ್ ಪೊಲೀಸ್ ಮತ್ತು ಕರಾವಳಿ ಕಾವಲು ಪಡೆಯ ಕಾರ್ಯ ಶ್ಲಾಘನೀಯ ಎಂದು ಸಚಿವ ಅಮಿತ್ ಶಾ ಅಭಿನಂದಿಸಿದ್ದಾರೆ.

*****************

ಅಮೆರಿಕದ ಗಾಯಕಿ ಕೇಟಿ ಪೆರ್ರಿ ಸೇರಿದಂತೆ ಆರು ಮಹಿಳೆಯರ ಗುಂಪು ಇಂದು ಅಮೆಜಾನ್ ಸಂಸ್ಥಾಪಕ ಜೆಫ್ ಬೆಜೋಸ್ ಒಡೆತನದ ಬಾಹ್ಯಾಕಾಶ ಕಂಪನಿಯಾದ ಬ್ಲೂ ಒರಿಜಿನ್‌ನಿಂದ ರಾಕೆಟ್‌ನಲ್ಲಿ ಬಾಹ್ಯಾಕಾಶಕ್ಕೆ ತೆರಳಲಿದ್ದಾರೆ.

ಇವರೊಂದಿಗೆ ಬಾಹ್ಯಾಕಾಶಕ್ಕೆ ಪ್ರಯಾಣಿಸುತ್ತಿರುವವರಲ್ಲಿ ಟಿವಿ ನಿರೂಪಕಿ ಗೇಲ್ ಕಿಂಗ್, ಚಲನಚಿತ್ರ ನಿರ್ಮಾಪಕಿ ಕೆರಿಯಾನ್ನೆ ಫ್ಲಿನ್, ನಾಸಾದ ಮಾಜಿ ಏರೋಸ್ಪೇಸ್ ಎಂಜಿನಿಯರ್ ಐಶಾ ಬೋವ್ ಮತ್ತು ಲೈಂಗಿಕ ದೌರ್ಜನ್ಯದ ವಿರುದ್ಧ ಅಭಿಯಾನ ನಡೆಸುತ್ತಿರುವ ಸಂಸ್ಥೆಯೊಂದರ ಸಂಸ್ಥಾಪಕಿ ಅಮಂಡಾ ನಗುಯನ ಸೇರಿದ್ದಾರೆ. ಅಮೆರಿಕದ ಪಶ್ಚಿಮ ಟೆಕ್ಸಾಸ್‌ನಿಂದ ರಾಕೆಟ್ ಬಾಹ್ಯಾಕಾಶಕ್ಕೆ ಉಡ್ಡಯನಗೊಳ್ಳಲಿದೆ.

*****************

ತೆಲಂಗಾಣ ರಾಜ್ಯ ಸರ್ಕಾರವು ಡಾ.ಬಿ.ಆರ್.ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯಂದು, ಪರಿಶಿಷ್ಟ ಜಾತಿ ಮೀಸಲಾತಿ ವರ್ಗೀಕರಣ ಕಾಯ್ದೆ 2025 ಅನ್ನು ಅಧಿಕೃತವಾಗಿ ಜಾರಿಗೆ ತಂದಿದೆ. ಅಂಚಿನಲ್ಲಿರುವ ಸಮುದಾಯಗಳ ದೀರ್ಘಕಾಲದ ಬೇಡಿಕೆಗಳನ್ನು ಪರಿಹರಿಸುವ ಗುರಿಯನ್ನು ಹೊಂದಿರುವ ಮಹತ್ವದ ನೀತಿ–ನಿರ್ಧಾರವನ್ನು ಗುರುತಿಸುವ ನಿಟ್ಟಿನಲ್ಲಿ ಸರ್ಕಾರಿ ಆದೇಶ ಹೊರಡಿಸಲಾಗಿದೆ.

ಇದರ ಪ್ರಕಾರ ಪರಿಶಿಷ್ಟ ಜಾತಿ, ಉಪಪಂಗಡಗಳ ನಡುವೆ ಸರ್ಕಾರಿ ಯೋಜನೆಗಳ ಪ್ರಯೋಜನಗಳ ಸಮಾನ ವಿತರಣೆಯನ್ನು ಖಚಿತಪಡಿಸಿಕೊಳ್ಳಲು ತೆಲಂಗಾಣದ 56 ಪರಿಶಿಷ್ಟ ಜಾತಿ ಸಮುದಾಯಗಳನ್ನು ಈಗ ಮೂರು ಗುಂಪುಗಳಾಗಿ ವಿಂಗಡಿಸಿದೆ.

ಕಳೆದ ತಿಂಗಳು ರಾಜ್ಯ ಸರ್ಕಾರ ಅಂಗೀಕರಿಸಿದ ವಿಧೇಯಕಕ್ಕೆ ರಾಜ್ಯಪಾಲರ ಅನುಮೋದನೆ ನಂತರ, ಇಂದು ಸರ್ಕಾರಿ ಆದೇಶ ಹೊರಡಿಸಲಾಗಿದೆ.

*****************

ದೇಶದ ನೂತನ ಮೂರು ಅಪರಾಧ ಕಾಯ್ದೆಗಳು, 21ನೇ ಶತಮಾನದ ಅತಿದೊಡ್ಡ ಸುಧಾರಣೆಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಅಖಿಲ ಭಾರತ ವಿಧಿವಿಜ್ಞಾನ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ನ್ಯಾಯ ವ್ಯವಸ್ಥೆಗಳನ್ನು ದೃಢೀಕರಿಸಲು ಮತ್ತು ವೈಜ್ಞಾನಿಕವಾಗಿಸಲು ಪ್ರಯತ್ನಿಸುತ್ತಿದೆ ಎಂದು ಅಭಿಪ್ರಾಯಪಟ್ಟರು.

ದೇಶದ ಅಪರಾಧ ನ್ಯಾಯ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ವಿಧಿವಿಜ್ಞಾನವು ತುಂಬಾ ಉಪಯುಕ್ತವಾಗಿದೆ ಹಾಗೂ ಇದರ ಮೂಲಕ ಸುರಕ್ಷಿತ ಮತ್ತು ಸಮರ್ಥ ಭಾರತವನ್ನು ರಚಿಸುವುದು ಮುಖ್ಯ ಉದ್ದೇಶವಾಗಿದೆ. ಸಕಾಲಿಕ ನ್ಯಾಯವನ್ನು ಒದಗಿಸಬೇಕಾದರೆ ಮತ್ತು ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಬೇಕಾದರೆ, ವಿಧಿ ವಿಜ್ಞಾನವಿಲ್ಲದೆ ಸಾಧ್ಯವಿಲ್ಲ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದರು.

*****************

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಶಾಶ್ವತ ಸ್ಥಾನಕ್ಕಾಗಿ ಭಾರತದ ಪ್ರಯತ್ನಕ್ಕೆ ರಷ್ಯಾ ತನ್ನ ಬೆಂಬಲವನ್ನು ಪುನರುಚ್ಚರಿಸಿದೆ ಮತ್ತು ಮುಂಬರುವ ವರ್ಷಗಳಲ್ಲಿ ಭಾರತ-ರಷ್ಯಾ ನಡುವಿನ ಪಾಲುದಾರಿಕೆ ಮುಂದುವರಿಯುತ್ತದೆ ಎಂಬ ಆಶಾವಾದವನ್ನು ವ್ಯಕ್ತಪಡಿಸಿದೆ. ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ 78ನೇ ವಾರ್ಷಿಕೋತ್ಸವದಂದು ರಷ್ಯಾದ ವಿದೇಶಾಂಗ ಸಚಿವಾಲಯವು ಭಾರತವನ್ನು ಅಭಿನಂದಿಸಿದೆ.

ಭಾರತದೊಂದಿಗಿನ ತನ್ನ ಸ್ನೇಹ ಸಂಬಂಧಗಳ ತ್ವರಿತ ಮತ್ತು ಸ್ಥಿರ ಅಭಿವೃದ್ಧಿ ಹಾಗೂ ಸಂಬಂಧಗಳ ವಿಸ್ತರಣೆಯಲ್ಲಿ ರಷ್ಯಾ ವಿಶ್ವಾಸ ವ್ಯಕ್ತಪಡಿಸಿದೆ. ಭಾರತದೊಂದಿಗಿನ ತನ್ನ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ತನ್ನ ಬದ್ಧತೆಯನ್ನು ಮತ್ತಷ್ಟು ದೃಢಪಡಿಸಿದೆ.

*****************

ಲಕ್ನೋದ ಭಾರತ ರತ್ನ  ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-20 ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್  ತಂಡಗಳು ಮುಖಾಮುಖಿಯಾಗಿವೆ.
ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್  ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*****************

ಏಪ್ರಿಲ್ 26 ರಿಂದ ಮೇ 4ರವರೆಗೆ ಪರ್ತ್ ಹಾಕಿ ಕ್ರೀಡಾಂಗಣದಲ್ಲಿ ನಡೆಯಲಿರುವ ಮುಂಬರುವ ಆಸ್ಟ್ರೇಲಿಯಾ ಪ್ರವಾಸಕ್ಕಾಗಿ ಹಾಕಿ ಇಂಡಿಯಾ ಇಂದು 26 ಸದಸ್ಯರ ಭಾರತೀಯ ಮಹಿಳಾ ತಂಡವನ್ನು ಪ್ರಕಟಿಸಿದೆ.

ಭಾರತವು ಮೊದಲ ಎರಡು ಪಂದ್ಯಗಳಲ್ಲಿ ಆಸ್ಟ್ರೇಲಿಯಾ ಎ ತಂಡವನ್ನು ಎದುರಿಸಲಿದೆ. ನಂತರ ಮೂರು ಪಂದ್ಯಗಳಲ್ಲಿ ಹಿರಿಯ ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ.

ತಂಡವನ್ನು ಮಿಡ್‌ಫೀಲ್ಡರ್ ಸಲಿಮಾ ಟೆಟೆ ಮುನ್ನಡೆಸಲಿದ್ದಾರೆ. ಅನುಭವಿ ಆಟಗಾರ್ತಿ ನವನೀತ್ ಕೌರ್ ಉಪನಾಯಕಿಯಾಗಿದ್ದಾರೆ.

*****************

ಖೇಲೋ ಇಂಡಿಯಾ ಯೂತ್ ಗೇಮ್ಸ್ 2025ರ ಮ್ಯಾಸ್ಕಾಟ್ ಮತ್ತು ಲಾಂಛನವನ್ನು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಮತ್ತು ಕೇಂದ್ರ ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಬಿಹಾರದಲ್ಲಿಂದು ಅನಾವರಣಗೊಳಿಸಿದರು.

ಖೇಲೋ ಇಂಡಿಯಾ ಯೂತ್ ಗೇಮ್ಸ್ 2025 ಬಿಹಾರದ ವಿವಿಧ ನಗರಗಳಲ್ಲಿ ಮೇ 4 ರಿಂದ ಮೇ 15 ರವರೆಗೆ ನಡೆಯಲಿದೆ. ಪಾಟ್ನಾ, ರಾಜಗೀರ್, ಬೇಗುಸರಾಯ್, ಭಾಗಲ್ಪುರ್ ಮತ್ತು ಇತರೆ ನಗರಗಳಲ್ಲಿ ನಡೆಯುವ ಕ್ರೀಡಾಕೂಟದಲ್ಲಿ ಅಥ್ಲೆಟ್ಸ್ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿವೆ.

*****************

ಈಕ್ವೆಡಾರ್‌ನ ಅಧ್ಯಕ್ಷೀಯ ಚುನಾವಣೆಯಲ್ಲಿ ಹಾಲಿ ಅಧ್ಯಕ್ಷ ಡೇನಿಯಲ್ ನೊಬೊವಾ ಎರಡನೇ ಬಾರಿಗೆ ಆಯ್ಕೆಯಾಗಿದ್ದಾರೆ. ಅವರು ತಮ್ಮ ಪ್ರತಿಸ್ಪರ್ಧಿ ಲೂಯಿಸಾ ಗೊನ್ಜಾಲೆಜ್ ವಿರುದ್ಧ ಶೇಕಡ 55.85 ರಷ್ಟು ಮತಗಳನ್ನು ಗಳಿಸಿದ್ದಾರೆ.

********ಮುಕ್ತಾಯ********